ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ವಸತಿ ನಿಲಯಗಳಲ್ಲಿ ಖಾಯಂ ನೌಕರರನ್ನು ನೇಮಿಸುವ ಬಗ್ಗೆ

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

601 (873) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಈ ವಸತಿ ನಿಲಯಗಳಿಗೆ ಸಮರ್ಥ ಮೇಲ್ವಿಚಾರಕರನ್ನು ನೇಮಿಸಲಾಗಿದೆಯೇ ; ಇವರ ಸಂಖ್ಯೆ ಎಷ್ಟು ; ಈ ಸಂಖ್ಯೆಯು ವಿದ್ಯಾರ್ಥಿಗಳಿಗೆ ಅನುಗುಣವಾಗಿದೆಯೇ ; ವಸತಿ ನಿಲಯಗಳಲ್ಲಿ ಕಂಪ್ಯೂಟರ್-ಇಂಟರ್ನೆಟ್ ವ್ಯವಸ್ಥೆ ಇದೆಯೇ ;

(ಆ) ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ಸೌಲಭ್ಯಗಳು ಇದೆಯೇ ; ಯಾವ ಯಾವ ಸೌಲಭ್ಯಗಳನ್ನು ಪ್ರಸ್ತುತ ವಸತಿ ನಿಲಯಗಳಲ್ಲಿ ನೀಡಲಾಗುತ್ತಿದೆ ;

(ಇ) ವಸತಿ ನಿಲಯಗಳಲ್ಲಿ ಶುಚಿತ್ವವನ್ನು ಕಾಪಾಡಲು ಯಾವ ಯಾವ ರೀತಿಯ ಕ್ರಮ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ;

(ಈ) ಈ ವಸತಿ ನಿಲಯಗಳನ್ನು ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ಮೇಲ್ದರ್ಜೆಗೆ ಏರಿಸಲು ಸರ್ಕಾರದ ಕ್ರಮವೇನು ?